## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 594 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 08-12-2023. |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ 'ಗೃಹ ಲಕ್ಷ್ಮೀ' ಯೋಜನೆ ಜಾರಿಯಾದಾಗಿನಿಂದ ಇದುವರೆಗೂ ಎಷ್ಟು ಜನ ಮಹಿಳೆಯರು ಈ ಯೋಜನೆಯಡಿ ನೋಂದಾಯಿಸಿಕೊಂಡಿದ್ದಾರೆ; (ಜಿಲ್ಲಾವಾರು ವಿವರ ನೀಡುವುದು) | ರಾಜ್ಯದಲ್ಲಿ ಗೃಹಲಕ್ಷ್ಮೀ ಯೋಜನೆ ಜಾರಿಯಾದಾಗಿನಿಂದ ಇದುವರೆಗೂ 11724825 ಜನ ಮಹಿಳೆಯರು ಈ ಯೋಜನೆಯಡಿ ನೋಂದಾಯಿಸಿಕೊಂಡಿರುತ್ತಾರೆ. ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಆ | ಗೃಹ ಲಕ್ಷ್ಮೀ ಯೋಜನೆಗೆ ಅನುಸರಿಸುವ ಮಾನದಂಡಗಳೇನು; | ಗೃಹಲಕ್ಷ್ಮೀ ಯೋಜನೆ ಸೌಲಭ್ಯ ಪಡೆಯಲು ಇರಬೇಕಾದ ಮಾನದಂಡಗಳು ಈ ಕೆಳಕಂಡಂತಿವೆ.<br>1. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯು ವಿತರಿಸುವ ಅಂತ್ಯೋದಯ, ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸುವ ಮಹಿಳೆಯು ಈ ಯೋಜನೆಯ ಅರ್ಹ ಫಲಾನುಭವಿಯಾಗಿರುತ್ತಾರೆ.<br>2. ಕುಟುಂಬದ ಯಜಮಾನಿ ಅಥವಾ ಯಜಮಾನಿಯ ಪತಿ ಆದಾಯ ತೆರಿಗೆ ಪಾವತಿದಾರರಾಗಿದ್ದಲ್ಲಿ ಈ ಯೋಜನೆಗೆ ಅರ್ಹರಾಗುವುದಿಲ್ಲ.<br>3. ಕುಟುಂಬದ ಯಜಮಾನಿ ಅಥವಾ ಯಜಮಾನಿಯ ಪತಿ ಜಿಎಸ್‌ಟಿ ರಿಟರ್ನ್ಸ್ ಸಲ್ಲಿಸುವವರಾಗಿದ್ದಲ್ಲಿ ಅರ್ಹರಾಗುವುದಿಲ್ಲ. |
| ಇ | ಗೃಹ ಲಕ್ಷ್ಮೀ ಯೋಜನೆಗೆ ಅರ್ಜಿ ಸಲ್ಲಿಸುವಾಗ ತಾಂತ್ರಿಕ ದೋಷಗಳು ಕಂಡು ಬಂದಿದ್ದು ನಿಜವೆ; ಹಾಗಿದ್ದಲ್ಲಿ, ತಾಂತ್ರಿಕ ದೋಷಗಳನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಗೃಹಲಕ್ಷ್ಮೀ ಯೋಜನೆಯಡಿ ರಾಜ್ಯಾದ್ಯಂತ ಎಲ್ಲಾ ಗ್ರಾಮ ಒನ್/ ಕರ್ನಾಟಕ ಒನ್/ ಬೆಂಗಳೂರು ಒನ್/ಬಾಪೂಜಿ ಸೇವಾ ಕೇಂದ್ರ/ನಗರ ಸ್ಥಳೀಯ ಆಡಳಿತ ಕೇಂದ್ರ ಮತ್ತು ವಾರ್ಡ್ ಕಛೇರಿಗಳಲ್ಲಿ ನೋಂದಾಯಿಸಿಕೊಳ್ಳಲು ಫಲಾನುಭವಿಗಳಿಗೆ ಅವಕಾಶ ಕಲ್ಪಿಸಲಾಗಿತ್ತು. ಆದುದರಿಂದ, ಅರ್ಜಿ ನೋಂದಣಿ ಸಮಯದಲ್ಲಿ ಯಾವುದೇ ತಾಂತ್ರಿಕ ಸಮಸ್ಯೆ ಉಂಟಾಗಿರುವುದಿಲ್ಲ. |
| ಈ) | ಕೆಲವು ಮಹಿಳೆಯರು ಗೃಹ ಲಕ್ಷ್ಮೀ ಯೋಜನೆಗೆ ಅರ್ಜಿ ಸಲ್ಲಿಸಿ ನಾಲ್ಕು ತಿಂಗಳಾದರೂ ಇನ್ನೂ ಫಲಾನುಭವಿಗಳಿಗೆ ಹಣ ಬಂದಿಲ್ಲವಾದ್ದರಿಂದ ಯಾವ ಕಾಲಮಿತಿಯಲ್ಲಿ ಈ ಫಲಾನುಭವಿಗಳ ಖಾತೆಗೆ ಹಣ ಜಮೆ ಮಾಡಲಾಗುವುದು; | • ಗೃಹಲಕ್ಷ್ಮೀ ಯೋಜನೆಯಡಿ ನೋಂದಣಿಯಾದ ಫಲಾನುಭವಿಗಳ ಆಧಾರ್ ಕಾರ್ಡ್, ಅವರ ಬ್ಯಾಂಕ್ ಖಾತೆ/NPCI Mapping ನೊಂದಿಗೆ ಜೋಡಣೆಯಾಗದಿದ್ದಲ್ಲಿ, ID validation Fail ಆಗಿದ್ದಲ್ಲಿ, E-KYC ಅಗತ್ಯವಿದ್ದ ಸಂದರ್ಭಗಳಲ್ಲಿ ಫಲಾನುಭವಿಗಳ ಖಾತೆಗೆ ಸಹಾಯಧನ ತಲುಪಿರುವುದಿಲ್ಲ. |

| | | |
|---|---|---|
| | | • ಫಲಾನುಭವಿಗಳು ತಮ್ಮ ಅರ್ಜಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಬಗೆಹರಿಸಿಕೊಂಡ ನಂತರ ಅವರ ಖಾತೆಗೆ ಗೃಹಲಕ್ಷ್ಮಿ ಯೋಜನೆಯಡಿ ಸಹಾಯಧನ ಜಮೆ ಮಾಡಲಾಗುತ್ತದೆ. |
| ಉ) | ಈಗ ಅರ್ಜಿ ಸಲ್ಲಿಸುತ್ತಿರುವ ಫಲಾನುಭವಿಗಳಿಗೂ ಯೋಜನೆ ಜಾರಿಯಾದಾಗಿನ ದಿನಾಂಕದಿಂದಲೇ ಹಣ ಜಮೆ ಮಾಡಲಾಗುತ್ತದೆಯೇ? (ಈ ಬಗ್ಗೆ ವಿವರ ನೀಡುವುದು) | ಪ್ರಸ್ತುತ ಹೊಸದಾಗಿ ಅರ್ಜಿ ಸಲ್ಲಿಸುವ ಫಲಾನುಭವಿಯು ಅರ್ಜಿ ಸಲ್ಲಿಸಿದ ದಿನಾಂಕದಿಂದ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. |

**ಸಂಖ್ಯೆ: ಮಮಇ 178 ಮಮಅ 2023**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.

ಅನುಬಂಧ

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 420(594)ಕ್ಕೆ ಮಾಹಿತಿ**

| SL.No | District Name | 30 November |
|---|---|---|
| 1 | BAGALKOTE | 387638 |
| 2 | BALLARI | 268969 |
| 3 | BELAGAVI | 1046918 |
| 4 | BENGALURU RURAL | 197810 |
| 5 | BENGALURU URBAN | 858750 |
| 6 | BIDAR | 313899 |
| 7 | CHAMARAJANAGARA | 253672 |
| 8 | CHIKKABALLAPURA | 268385 |
| 9 | CHIKKAMAGALURU | 252182 |
| 10 | CHITRADURGA | 368513 |
| 11 | DAKSHINA KANNADA | 346156 |
| 12 | DAVANGERE | 346492 |
| 13 | DHARWAD | 352727 |
| 14 | GADAG | 227334 |
| 15 | HASSAN | 426704 |
| 16 | HAVERI | 362169 |
| 17 | KALABURAGI | 509734 |
| 18 | KODAGU | 112857 |
| 19 | KOLAR | 300852 |
| 20 | KOPPAL | 299705 |
| 21 | MANDYA | 435602 |
| 22 | MYSURU | 659114 |
| 23 | RAICHUR | 396473 |
| 24 | RAMANAGARA | 263759 |
| 25 | SHIVAMOGGA | 375947 |
| 26 | TUMAKURU | 603844 |
| 27 | UDUPI | 216296 |
| 28 | UTTARA KANNADA | 308007 |
| 29 | VIJAYANAGAR | 269766 |
| 30 | VIJAYAPURA | 459518 |
| 31 | YADGIR | 235033 |
| | Total | 11724825 |